# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 273 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಎಂ. ನಾಗರಾಜು (ವಿಧಾನಸಭಾ ಕ್ಷೇತ್ರ) |
| **ಉತ್ತರಿಸುವ ದಿನಾಂಕ** | : | 29.01.2026 |
| **ಉತ್ತರಿಸುವ ಸಚಿವರು** | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಜನವರಿ 2026ರ ಕರಾವಳಿ ಕರ್ನಾಟಕ ಪ್ರವಾಸೋದ್ಯಮ ಸಮಾವೇಶದಲ್ಲಿ ಅನಾವರಣಗೊಂಡ ರೂ.1,260 ಕೋಟಿಯ ಮಾರ್ಗ ಸೂಚಿಗಳನ್ನು ಯಾವಾಗ ಅನುಷ್ಠಾನಗೊಳಿಸಲಾಗುವುದು; | ಜನವರಿ 2026ರ ಕರಾವಳಿ ಕರ್ನಾಟಕ ಪ್ರವಾಸೋದ್ಯಮ ಸಮಾವೇಶದಲ್ಲಿ ಸ್ವೀಕರಿಸಲಾದ ಹೂಡಿಕೆ ಪ್ರಸ್ತಾವನೆಗಳಿಗೆ, ಪ್ರತಿಪಾದಕರಿಂದ ವಿವರವಾದ ಪ್ರಸ್ತಾವನೆಗಳು ಸ್ವೀಕೃತವಾದ ನಂತರ ಕ್ರಿಯಾಯೋಜನೆ ತಯಾರಿಸಲು ಕ್ರಮವಹಿಸಲಾಗುವುದು. |
| ಆ) | ದಕ್ಷಿಣ ಕನ್ನಡ ಉಡುಪಿ ಮತ್ತು ಉತ್ತರ ಕನ್ನಡದಾದ್ಯಂತ ವಿವಿಧ ಯೋಜನೆಗಳಿಗೆ 31 ಒಪ್ಪಂದಗಳಿಗೆ ಸಹಿ ಹಾಕಲಾಗಿದ್ದು, ಹೂಡಿಕೆದಾರರು ಪ್ರಸ್ತುತ ಪ್ರಮುಖ ಅಡಚಣೆ ಎಂದು ಉಲ್ಲೇಖಿಸಿರುವ ಕರಾವಳಿ ನಿಯಂತ್ರಣ ವಲಯ(CRZ) ಅನುಮೋದನೆಗಳನ್ನು ಸುಗಮಗೊಳಿಸಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ; | ಕೇಂದ್ರ ಸರ್ಕಾರವು ಪರಿಸರ (ಸಂರಕ್ಷಣಾ) ಕಾಯಿದೆ 1986ರ ಅಡಿಯಲ್ಲಿ ಹೊರಡಿಸಿರುವ ಕರಾವಳಿ ನಿಯಂತ್ರಣ ವಲಯ (ಸಿಆರ್‌ಝಡ್) ವ್ಯಾಪ್ತಿಯಲ್ಲಿ ನಿರ್ದಿಷ್ಟ ಯೋಜನೆ/ ಚಟುವಟಿಕೆಗಳಿಗೆ ಸಿಆರ್‌ಝಡ್ ನಿರಾಕ್ಷೇಪಣಾ ಪತ್ರ ಪಡೆಯಬೇಕಾಗಿರುತ್ತದೆ.<br><br>ಕರಾವಳಿ ನಿಯಂತ್ರಣ ವಲಯ (CRZ) ಅನುಮೋದನೆಗಳನ್ನು ಸುಗಮಗೊಳಿಸುವ ಸಲುವಾಗಿ ಕೇಂದ್ರ ಸರ್ಕಾರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯವು ರೂಪಿಸಿರುವ PARIVESH 2.0 portal ಮುಖಾಂತರ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.<br><br>ಅದರಂತೆ, ಕರಾವಳಿ ನಿಯಂತ್ರಣ ವಲಯದಲ್ಲಿ ಅನುಮತಿಸಿದ ಚಟುವಟಿಕೆಗಳಿಗೆ/ ಪ್ರಸ್ತಾವಿಕ ಯೋಜನೆಗಳಿಗೆ ಕರಾವಳಿ ನಿಯಂತ್ರಣ ವಲಯ ಅಧಿಸೂಚನೆ 2019ರಡಿ ಸೂಚಿಸಿರುವ ಮಾರ್ಗಸೂಚಿಯನ್ವಯ ಪೂರಕ ದಾಖಲಾತಿಗಳನ್ನು PARIVESH portal ಮುಖಾಂತರ ಅರ್ಜಿ ಸಲ್ಲಿಸಿ ಕರ್ನಾಟಕ ರಾಜ್ಯ ಕರಾವಳಿ ವಲಯ ನಿರ್ವಹಣಾ ಪ್ರಾಧಿಕಾರದಿಂದ ಚಟುವಟಿಕೆಗಳಿಗೆ ಕರಾವಳಿ ನಿಯಂತ್ರಣ ವಲಯ ನಿರಾಕ್ಷೇಪಣಾ ಪತ್ರ ಪಡೆಯಬಹುದಾಗಿದೆ. |

| | | |
|---|---|---|
| ಇ) | ಪ್ರವಾಸಿಗರ ಸುರಕ್ಷತೆ ಮತ್ತು ಅನುಭವವನ್ನು ಸುಧಾರಿಸಲು ಪ್ರವಾಸಿ ಮಿತ್ರರ (ತರಬೇತಿ ಪಡೆದ ಪ್ರವಾಸಿ ಮಾರ್ಗದರ್ಶಕರು) ಸಂಖ್ಯೆಯನ್ನು 1,000ಕ್ಕೆ ಹೆಚ್ಚಿಸುವ ಯೋಜನೆಯ ಪ್ರಸ್ತುತ ಅಂತವೇನು? | ಪ್ರಸ್ತುತ ರಾಜ್ಯದ ಪ್ರವಾಸಿ ತಾಣಗಳಲ್ಲಿ 655 ಪ್ರವಾಸಿ ಮಿತ್ರರು ಕಾರ್ಯನಿರ್ವಹಿಸುತ್ತಿದ್ದು, ಪ್ರವಾಸಿ ಮಿತ್ರರ ಸಂಖ್ಯೆಯನ್ನು 1,000ಕ್ಕೆ ಹೆಚ್ಚಿಸಲು ಆರಕ್ಷಕ ಮಹಾನಿರ್ದೇಶಕರು, ಗೃಹರಕ್ಷಕ ದಳದ ಮಹಾಸಮಾದೇಷ್ಟರು ಮತ್ತು ನಿರ್ದೇಶಕರು ಪೌರರಕ್ಷಣೆ ಇವರಿಂದ ಹೆಚ್ಚುವರಿಯಾಗಿ 345 ಪ್ರವಾಸಿ ಮಿತ್ರರ (ಗೃಹ ರಕ್ಷಕರ)ನ್ನು ಪಡೆದು ಅವರಿಗೆ ತರಬೇತಿ ನೀಡಲು ತಗಲುವ ವೆಚ್ಚದ ಅಂದಾಜು ಪಟ್ಟಿಯನ್ನು ಪಡೆಯಲಾಗಿದೆ.<br><br>ಮುಂದುವರೆದು, 345 ಪ್ರವಾಸಿ ಮಿತ್ರರಿಗೆ ತರಬೇತಿ ನೀಡುವ ಬಗ್ಗೆ ಜಿಲ್ಲಾವಾರು ಪ್ರಮುಖ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರ ಸುರಕ್ಷತೆ ಹಾಗೂ ಭದ್ರತೆಯನ್ನು ಕಲ್ಪಿಸಲು ಅವಶ್ಯವಿರುವ ಹೆಚ್ಚುವರಿ ಪ್ರವಾಸಿ ಮಿತ್ರರ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. |

**TOR 19 TDV 2026**

**(ಎಚ್.ಕೆ. ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು.